ಇ) ರಾತ್ರಿ ಹೊತ್ತಿನಲ್ಲಿ ಚಲಿಸುವ ಆಟೋಗಳಿಗೆ ಬೆಂಗಳೂರಿನ ಮಾದರಿಯಲ್ಲಿ ಗುರುತು ಚೀಟಿ ನೀಡಿ ಪ್ರದರ್ಶನ ಮಾಡಲು ತಾಂತ್ರಿಕ ತೊಂದರೆಗಳಿವೆಯೇ?

ಈ) ಕಳೆದ ಮೂರು ವರ್ಷಗಳಲ್ಲಿ ಹೆಚ್ಚುವರಿ ದರ ವಸೂಲು ಮಾಡುವ ಚಾಲಕರ ವಿರುದ್ಧ ಪೊಲೀಸ್ ಇಲಾಖೆ/ಸಾರಿಗೆ ಇಲಾಖೆಯಿಂದ ಹೂಡಿದ ಮೊಕದ್ದಮೆಗಳು ಎಷ್ಟು? ಈ ಪೈಕಿ ವಸೂಲಾದ ದಂಡದ ಮೊಬಲಗು ಎಷ್ಟು?

**ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :**

ಅ) ಶಿವಮೊಗ್ಗ ನಗರದಲ್ಲಿ ಡಿಸೆಂಬರ್ 2009ರ ಅಂತ್ಯಕ್ಕೆ ಒಟ್ಟು 3524 ಆಟೋರಿಕ್ಷಾಗಳು ಪರವಾನಿಗೆ ಹೊಂದಿರುತ್ತವೆ. ಸಿ.ಎನ್.ಜಿ.ಪರಿವರ್ತಿತ ಆಟೋರಿಕ್ಷಾಗಳು ಯಾವುದೂ ಇರುವುದಿಲ್ಲ. 460 ಆಟೋರಿಕ್ಷಾಗಳು ದ್ವಿ–ಇಂಧನ (ಎಲ್.ಪಿ.ಜಿ.) ವ್ಯವಸ್ಥೆ ಹೊಂದಿವೆ.

ಆ) ಆಟೋರಿಕ್ಷಾಗಳಿಗೆ ಡಿಜಿಟಲ್ ಮೀಟರ್ ಅಳವಡಿಸಿರುವುದಿಲ್ಲ.

ಇ) ಶಿವಮೊಗ್ಗ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಆಟೋರಿಕ್ಷಾ ಚಾಲಕರಿಗೆ ಚಾಲನಾ ಅನುಜ್ಞಾಪತ್ರ ಹೊರತುಪಡಿಸಿ ಇತರೆ ಗುರುತಿನ ಚೀಟಿ ನೀಡಿರುವುದಿಲ್ಲ.

ಸಂಚಾರಿ ಪೊಲೀಸ್ ವತಿಯಿಂದ ಬೆಂಗಳೂರು ನಗರದಲ್ಲಿ ಆಟೋರಿಕ್ಷಾ ಚಾಲಕರಿಗೆ ಗುರುತಿನ ಚೀಟಿ ನೀಡಲಾಗುತ್ತಿದೆ. ಶಿವಮೊಗ್ಗ ನಗರದಲ್ಲಿ ಈ ಮಾದರಿಯ ಗುರುತಿನ ಚೀಟಿ ನೀಡಲು ಪೊಲೀಸ್ ಇಲಾಖೆಯನ್ನು ಕೋರಲಾಗುವುದು.

ಈ) ಶಿವಮೊಗ್ಗ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ.

**ನಿವೃತ್ತಿ ಅಂಚಿನಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವ ಧನ**

**417 (604) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು) :** ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಿವೃತ್ತಿ ಅಂಚಿನಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ 50000 ರೂ.ಗಳ ಗೌರವಧನ ನೀಡುವ ಸಲುವಾಗಿ ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ;

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿಗಳಿವೆ ಹಾಗೂ ಎಷ್ಟು ಸ್ವಂತ ಕಟ್ಟಡಗಳಿವೆ ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ;

ಇ) ರಾಜ್ಯದಲ್ಲಿ ಎಷ್ಟು ಜನ ಅಂಗನವಾಡಿ ಕಾರ್ಯಕರ್ತೆಯರಿದ್ದಾರೆ ಹಾಗೂ ಎಷ್ಟು ಜನ ಅಂಗನವಾಡಿ ಕಾರ್ಯಕರ್ತೆಯವರು ನಿವೃತ್ತಿ ಅಂಚಿನಲ್ಲಿದ್ದಾರೆ;

**ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :**

ಅ) ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಸಹಾಯಕಿಯರಿಗೆ ವಂತಿಗೆ ಆಧಾರಿತ ನಿವೃತ್ತಿ ವೇತನ ನೀಡುವ ಯೋಜನೆ ಜಾರಿಗೊಳಿಸುವ ಬಗ್ಗೆ 2010–11ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿರುತ್ತದೆ.

ಆ) ರಾಜ್ಯದಲ್ಲಿ 60046 ಅಂಗನವಾಡಿ ಕೇಂದ್ರಗಳು ಮತ್ತು 3331 ಮಿನಿ ಅಂಗನವಾಡಿ ಕೇಂದ್ರಗಳು ಮಂಜೂರಾಗಿರುತ್ತವೆ. 31981 ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿರುತ್ತವೆ. 6044 ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿವೆ. ಉಳಿದ 25352 ಕೇಂದ್ರಗಳು ಬಾಡಿಗೆ ರಹಿತವಾಗಿ ಶಾಲೆ, ದೇವಸ್ಥಾನ, ಪಂಚಾಯತ್ ಕಟ್ಟಡ ಮಹಿಳಾ ಮಂಡಳಿ ಮತ್ತು ಯುವಕ ಮಂಡಳಿ ಇತ್ಯಾದಿಗಳಲ್ಲಿ ನಡೆಯುತ್ತಿವೆ.

ಇ) ರಾಜ್ಯದಲ್ಲಿ 60046 ಅಂಗನವಾಡಿ ಕಾರ್ಯಕರ್ತೆಯರು ಮತ್ತು 3331 ಮಿನಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳು ಮಂಜೂರಾಗಿರುತ್ತದೆ. 55900 ಅಂಗನವಾಡಿ ಕಾರ್ಯಕರ್ತೆಯರು ಕಾರ್ಯನಿರ್ವಹಿಸುತ್ತಿದ್ದಾರೆ. ನಿವೃತ್ತಿ ನೀಡುವ ಯೋಜನೆ ಜಾರಿಗೊಳಿಸುವ ಬಗ್ಗೆ 2010–11ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾಗಿದ್ದು, ಇದನ್ನು ಸದ್ಯದಲ್ಲಿಯೇ ಅನುಷ್ಠಾನಗೊಳಿಸಲಾಗುವುದು. ಈ ಪ್ರಕ್ರಿಯೆಯನ್ನು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರಿಗೆ ನಿವೃತ್ತಿ ವಯಸ್ಸನ್ನು ನಿಗದಿ ಪಡಿಸಲಾಗುವುದು.